# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರವನ್ನು ಧಾರವಾಡ ತಾಲ್ಲೂಕು ರಾಯಪುರ ಗ್ರಾಮದಲ್ಲಿ ಸ್ಥಾಪಿಸಲು ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 111 ತಾಪಸ 2010, ದಿನಾಂಕ: 21.10.2011.
2. ಸರ್ಕಾರದ ಆದೇಶ ಸಂಖ್ಯೆ: ತೋಇ 17 ರೇಯೋವಿ 2014, ದಿನಾಂಕ: 30.12.2014.
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ: ರಾಗ್ರಾಸಂ.ಎ.ಸಿ. ಸಿಆರ್. 17/2014-15, ದಿನಾಂಕ: 21.05.2015.

ಪ್ರಸ್ತಾವನೆ:

ಪಂಚಾಯತ್ ರಾಜ್ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಭಾಗೀದಾರರುಗಳಾದ ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಸಾರ್ವಜನಿಕರು ಮುಂತಾದವರಿಗೆ ಪಂಚಾಯತ್ ರಾಜ್ ವ್ಯವಸ್ಥೆ ಅಥವಾ ಆಡಳಿತ ವಿಕೇಂದ್ರೀಕರಣದ ಬಗ್ಗೆ ಅರಿವನ್ನುಂಟುಮಾಡಿ ಅವರ ಕಾರ್ಯನಿರ್ವಹಣಾ ಸಾಮರ್ಥ್ಯವನ್ನು ವೃದ್ಧಿಸುವ ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಅವರ ಭಾಗವಹಿಸುವಿಕೆಯನ್ನು ಖಾತ್ರಿ ಪಡಿಸಲು ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ. ಮೈಸೂರಿನಲ್ಲಿ ಮಾತ್ರವೇ ಕಾರ್ಯಕ್ರಮಗಳ ಅನುಷ್ಠಾನಗೊಳಿಸುವುದು ಸಮಯ ಮತ್ತು ಹಣದ ವ್ಯಯಕ್ಕೆ ಕಾರಣವಾಗುತ್ತದೆ. ಈ ಹಿನ್ನೆಯಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ಕೇಂದ್ರಗಳನ್ನು ಕಲಬುರಗಿ ಮತ್ತು ಧಾರವಾಡಗಳಲ್ಲಿ ಓದಲಾದ (1)ರ ಸರ್ಕಾರದ ಆದೇಶದ ಮೂಲಕ ಸ್ಥಾಪಿಸುವ ಮೂಲಕ ಸಾಮರ್ಥ್ಯಾಭಿವೃದ್ಧಿ ಚಟುವಟಿಕೆಗಳನ್ನು ಸಹ ನಿಜ ಅರ್ಥದಲ್ಲಿ ವಿಕೇಂದ್ರೀಕರಿಸಲಾಗಿದೆ.

ಉದ್ದೇಶಿತ ಧಾರವಾಡದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರದ ಸ್ಥಾಪನೆಗೆ ಅಗತ್ಯವಿರುವ ಜಮೀನನ್ನು ಧಾರವಾಡ ತಾಲ್ಲೂಕು ರಾಯಪುರ ಗ್ರಾಮದ ರಿ.ಸ.ನಂ. 30+201/9ರ ಪೈಕಿ 2-00 ಎಕರೆ-ಗುಂಟೆ ಜಮೀನನ್ನು ಓದಲಾದ (2)ರ ಸರ್ಕಾರದ ಆದೇಶದ ಮೂಲಕ ಈಗಾಗಲೇ ಮಂಜೂರು ಮಾಡಲಾಗಿದೆ.

ಧಾರವಾಡದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರದ ಸ್ಥಾಪನೆಗೆ ಅಗತ್ಯವಿರುವ ಕಟ್ಟಡ ನಿರ್ಮಾಣ ಕಾಮಗಾರಿಗೆ ರೂ. 7.05 ಕೋಟಿಗಳ ಮೊತ್ತವನ್ನು ನಿಗಧಿಪಡಿಸಿ ದಿನಾಂಕ: 19.03.2015 ರಂದು ನಡೆದ ಸಚಿವ ಸಂಪುಟದಲ್ಲಿ ಅನುಮೋದನೆಯನ್ನು ನೀಡಲಾಗಿದೆ. ಅದರಂತೆ ಕಟ್ಟಡ ನಿರ್ಮಾಣ ಕಾಮಗಾರಿಗೆ ಮೊದಲ ಕಂತಾಗಿ ರೂ. 2.35 ಕೋಟಿಗಳನ್ನು ಬಿಡುಗಡೆಗೊಳಿಸುವಂತೆ ಕೋರಿ ಓದಲಾದ(3) ರ ಪತ್ರದಲ್ಲಿ ನಿರ್ದೇಶಕರು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಧಾರವಾಡದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರದ ಸ್ಥಾಪನೆಗೆ ಅಗತ್ಯವಿರುವ ಕಟ್ಟಡ ನಿರ್ಮಾಣ ಕಾಮಗಾರಿಗೆ ನಿಗಧಿಪಡಿಸಿರುವ ಒಟ್ಟು ಅಂದಾಜು ಮೊತ್ತ ರೂ. 7.05 ಕೋಟಿಗಳ ಪೈಕಿ ಮೊದಲ ಕಂತಾಗಿ ರೂ. 2.35 ಕೋಟಿಗಳನ್ನು ಬಿಡುಗಡೆಗೊಳಿಸುವ ಅಗತ್ಯವಿದ್ದು, ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 84 ಗ್ರಾಪಂಅ 2014, ಬೆಂಗಳೂರು, ದಿನಾಂಕ: 20.06.2015**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಧಾರವಾಡದ ರಾಯಪುರ ಗ್ರಾಮದಲ್ಲಿ ಸ್ಥಾಪಿಸಲಾಗುತ್ತಿರುವ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ಕಾಮಗಾರಿಗೆ ನಿಗಧಿಪಡಿಸಿರುವ ಒಟ್ಟು ಅಂದಾಜು ಮೊತ್ತ ರೂ. 7.05 ಕೋಟಿಗಳ ಪೈಕಿ ಮೊದಲ ಕಂತಾಗಿ **ರೂ. 2.35 ಕೋಟಿಗಳ (ಎರಡು ಕೋಟಿ ಮೂವತ್ತೈದು ಲಕ್ಷ ರೂಪಾಯಿಗಳು ಮಾತ್ರ)** ಅನುದಾನವನ್ನು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆಗೊಳಿಸಲಾಗಿದೆ.

ರೂ.2.35 ಕೋಟಿಗಳ (ಎರಡು ಕೋಟಿ ಮೂವತ್ತೈದು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು 2015-16ನೇ ಆರ್ಥಿಕ ಸಾಲಿಗೆ ಲೆಕ್ಕ ಶೀರ್ಷಿಕೆ: **2515-00-102-0-08-386 (ಯೋಜನೆ)**ರಡಿ ಭರಿಸಲು ಮಂಜೂರಾತಿ ನೀಡಲಾಗಿದೆ.

ಮುಂದೆ ನಿರ್ಧರಿಸಬಹುದಾದ ಅನುಷ್ಠಾನಾಧಿಕಾರಿಗೆ ಅನುದಾನ ಒದಗಿಸಲು ಅನುವಾಗುವಂತೆ ಪ್ರಸ್ತುತ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಅನುದಾನ ಬಿಡುಗಡೆಗೊಳಿಸುವ ತಾತ್ಕಾಲಿಕ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ.

ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ 60 ವೆಚ್ಚ-6/2015, ದಿನಾಂಕ: 21.05.2015 ರಲ್ಲಿ ಆಡಳಿತ ಇಲಾಖೆಗೆ ನೀಡಿರುವ ಸಹಮತಿಯನುಸಾರ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ;

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
5. ಜಿಲ್ಲಾ ಖಜಾನಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು.
6. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ – ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
7. ಗಣಕ ಕೋಶ – ಇಲಾಖಾ ವೆಬ್ ಸೈಟ್‌ನಲ್ಲಿ ಪ್ರದರ್ಶಿಸಲು.
8. ಶಾಖಾ ರಕ್ಷಾ ಕಡತಕ್ಕೆ.
9. ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು.